# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 10(45) |
| ಉತ್ತರಿಸಬೇಕಾದ ದಿನಾಂಕ | 13.02.2024 |
| ಉತ್ತರಿಸಬೇಕಾದವರು | ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| 1 | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರ ವೃಂದದ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾಯ್ದೆ-1973 ರನ್ವಯ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯು ಒಂದು ಸ್ವಾಯತ್ತ ಸಂಸ್ಥೆಯಾಗಿದ್ದು ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಾವಳಿಯನ್ವಯ ಸಹಾಯಕ ಕಾರ್ಯಪಾಲಕ ಅಭಿಯಂತರರ ವೃಂದದ ನೇಮಕಾತಿ ಪ್ರಾಧಿಕಾರವು ಮಂಡಳಿಯಾಗಿರುತ್ತದೆ. ದಿನಾಂಕ: 01.01.2021ಕ್ಕೆ ಅನ್ವಯವಾಗುವಂತೆ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರರ ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕುರಿತು ಸರ್ಕಾರದ ಪತ್ರ ಸಂಖ್ಯೆ: ನಅಇ / 38 / ಯುಡಬ್ಲ್ಯೂಇ / 2023 (ಇ), ದಿನಾಂಕ:17.10.2023ರಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಗೆ ಮಾರ್ಗಸೂಚಿಯನ್ನು ನೀಡಲಾಗಿತ್ತು. ಆದರೆ ಸದರಿ ಮಾರ್ಗಸೂಚಿಯನ್ನು ಪರಿಪಾಲಿಸಿ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಕ್ರಮವಹಿಸದೇ ಸರ್ಕಾರವು ನೀಡಿದ್ದ ಮಾರ್ಗಸೂಚಿಯನ್ನು ಮರುಪರಿಶೀಲಿಸುವಂತೆ ಮಂಡಳಿಯು ಸರ್ಕಾರಕ್ಕೆ ಮರುಪ್ರಸ್ತಾವನೆಯನ್ನು ಸಲ್ಲಿಸಿತ್ತು.<br><br>ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಕರ್ನಾಟಕ ನಾಗರಿಕ ಸೇವಾ ನಿಯಮವಳಿಯ ನಿಯಮ 32ರ ಪ್ರಕಾರ ಸಹಾಯಕ ಕಾರ್ಯಪಾಲಕ ಅಭಿಯಂತರರ ಹುದ್ದೆಗೆ ಸ್ವತಂತ್ರ ಪ್ರಭಾರದಲ್ಲಿರಿಸಿದ ನಂತರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ:**DPAR 05 SRC 1984 ದಿನಾಂಕ: 09.10.1985 ರಲ್ಲಿ** ನಿಗದಿಪಡಿಸಿರುವ ಎಲ್ಲಾ ಮಾನದಂಡ / ಮಾರ್ಗಸೂಚಿಗಳನ್ನು ಅನುಸರಿಸಿ/ಪರಿಪಾಲಿಸಿ ಕಾಲಮಿತಿಯಲ್ಲಿ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ನಡೆಸಿ ಸದರಿಯವರುಗಳಿಗೆ ಸ್ಥಾನಪನ್ನ ಮುಂಬಡ್ತಿ ನೀಡಲು ನೇಮಕಾತಿ/ಸಕ್ಷಮ ಪ್ರಾಧಿಕಾರವಾದ ಮಂಡಳಿಯು ಕ್ರಮವಹಿಸಬೇಕಾಗಿತ್ತು. ಆದರೆ ಮಂಡಳಿಯು ಈ ಕ್ರಮವನ್ನು ವಹಿಸದೇ 2008 ರಿಂದ 2020ರವರೆಗೆ ಅಂದರೆ ಸುಮಾರು 12 ವರ್ಷಗಳವರೆಗೆ ನಿಯಮ 32 ರಡಿ ಸ್ವತಂತ್ರ ಪ್ರಭಾರದಲ್ಲಿಯೇ ಮುಂದುವರೆಸಲಾಗಿದೆ. ಅಲ್ಲದೇ, |
| 2 | ಸರ್ಕಾರವು ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಲು ಮಾರ್ಗಸೂಚಿಯನ್ನು ನೀಡಿರುತ್ತದೆಯೇ; ನೀಡಿದ್ದಲ್ಲಿ, ಆ ಪ್ರಕಾರ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಲಾಗಿದೆಯೇ; ಅಂತಿಮಗೊಳಿಸಿದ್ದಲ್ಲಿ ಪ್ರತಿಯನ್ನು ಒದಗಿಸುವುದು; ಇಲ್ಲದಿದ್ದಲ್ಲಿ, ಯಾವಾಗ ಅಂತಿಮಗೊಳಿಸಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು) | |
| 3 | ಕರ್ನಾಟಕ ರಾಜ್ಯ ವಿಧಾನ ಮಂಡಲದ ಅನುಸೂಚಿತ ಜಾತಿ/ಪಂಗಡಗಳ ಶಾಸಕರ ಕಲ್ಯಾಣ ಸಮಿತಿಯು 2015ರಲ್ಲಿ ನೀಡಿರುವ ವರದಿಯಲ್ಲಿ ಎಸ್.ಸಿ/ಎಸ್.ಟಿ ಅಧಿಕಾರಿ/ನೌಕರರಿಗೆ ಮುಂಬಡ್ತಿ ದೊರಕುವಲ್ಲಿ ಅನ್ಯಾಯವಾಗಿದ್ದು ಇದನ್ನು ಪೂರ್ವಾನ್ವಯ ಮುಂಬಡ್ತಿ ಆಗಿ ಪರಿಗಣಿಸಬೇಕೆಂದು ಕಂಡಿಕೆ 1.31ರಲ್ಲಿ ಶಿಫಾರಸ್ಸು ಮಾಡಿದ್ದರೂ | |

| | | |
|---|---|---|
| | ಇದುವರೆಗೂ ಈ ವರದಿಯು ಅನುಷ್ಠಾನಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು? | ಸರ್ಕಾರದ ಪತ್ರ ಸಂಖ್ಯೆ: ನಅಇ/38/ಯುಡಬ್ಲ್ಯೂಇ/2023(ಇ) ದಿನಾಂಕ:17.10.2023 ರಲ್ಲಿ ಸರ್ಕಾರವು ನೀಡಿರುವ ಮಾರ್ಗಸೂಚಿಯನ್ನು ಮಾನ್ಯ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:5165/2022ರಲ್ಲಿ ದಿನಾಂಕ:09.11.2023ರಂದು ನೀಡಿರುವ ಆದೇಶದಲ್ಲಿ ಎತ್ತಿಹಿಡಿದಿರುತ್ತದೆ.<br><br>ಈ ಹಿನ್ನಲೆಯಲ್ಲಿ ಮಾನ್ಯ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 5165/2022ರಲ್ಲಿ ದಿನಾಂಕ:09.11.2023ರಂದು ನೀಡಿರುವ ಆದೇಶದನ್ವಯ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರ ವೃಂದದ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸುವ ಕುರಿತು ಪತ್ರ ಸಂಖ್ಯೆ:ನಅಇ/38/ಯುಡಬ್ಲ್ಯೂಇ/2023(ಇ) ದಿನಾಂಕ:17.10.2023 ರಲ್ಲಿ ಸರ್ಕಾರವು ನೀಡಿರುವ ಮಾರ್ಗಸೂಚಿಯನ್ವಯ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಿ ಸರ್ಕಾರದ ಸುತ್ತೋಲೆ ಸಂಖ್ಯೆ: DPAR 17 SRR 1979, ದಿನಾಂಕ:04.06.1979ರಂತೆ ಅರ್ಹ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳಿಗೆ ಪೂರ್ವಾನ್ವಯ ಮುಂಬಡ್ತಿ ನೀಡುವ ಕುರಿತು ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಕ್ರಮವಹಿಸಿ ಮಾನ್ಯ ಉಚ್ಛ ನ್ಯಾಯಾಲಯಕ್ಕೆ ಅನುಪಾಲನಾ ವರದಿಯನ್ನು ಸಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ಸರ್ಕಾರದ ಪತ್ರ ಸಂಖ್ಯೆ:ನಅಇ / 38 / ಯುಡಬ್ಲ್ಯೂಇ / 2023(ಇ), ದಿನಾಂಕ:19.01.2024 ರಲ್ಲಿ ತಿಳಿಸಲಾಗಿದೆ. ಮಾನ್ಯ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 5165/2022 ರಲ್ಲಿ ದಿನಾಂಕ:09.11.2023 ರಂದು ನೀಡಿರುವ ಆದೇಶದಲ್ಲಿ 04 ತಿಂಗಳ ಕಾಲಮಿತಿಯನ್ನು ನಿಗದಿಪಡಿಸಿದ್ದು ಈ ಅವಧಿಯೊಳಗೆ 01.01.2021ಕ್ಕೆ ಅನ್ವಯವಾಗುವಂತೆ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರರ ವೃಂದದ ಅಂತಿಮ ಜೇಷ್ಟತಾ ಪಟ್ಟಿಯನ್ನು ಪ್ರಕಟಿಸಿ ಅರ್ಹ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಪೂರ್ವಾನ್ವಯ ಮುಂಬಡ್ತಿ ನೀಡಲು ಕ್ರಮವಹಿಸಲಾಗುವುದು. |

ಸಂಖ್ಯೆ : ನಅಇ 22 ಯುಡಬ್ಲ್ಯೂಇ 2024

12/02/2024

**(ಬಿ.ಎಸ್ ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು